ವ್ಯವಹಾರ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ,
ಆಲೂರು.

**ಸಿ.ಸಿ.ಸಂಖ್ಯೆಃ 314/19**

| | | |
|---|---|---|
| ಸಾಕ್ಷಿದಾರರ ಹೆಸರು | ಚನ್ನೇಗೌಡ | ಸಿ.ಡಬ್ಲ್ಯೂಃ 10 |
| ಗಂಡನ / ತಂದೆ ಹೆಸರು | ನಂಜುಂಡೇಗೌಡ | ಪಿ.ಡಬ್ಲ್ಯೂಃ 6 |
| ವಯಸ್ಸು | 59 ವರ್ಷ | |
| ಉದ್ಯೋಗ | ಪಿ.ಎಸ್.ಐ | |
| ವಾಸಸ್ಥಳ | ಹಾಸನ | |

ಪ್ರಮಾಣ ವಚನ ಬೋಧಿಸಲಾಯಿತು.

ದಿಃ 30.01.2026

**ಮುಖ್ಯ ವಿಚಾರಣೆಃ ಸಸಅ ರಿಂದ**

ದಿಃ 17.08.2017 ರಿಂದ 25.11.2025 ರವರೆಗೆ ಆಲೂರು ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ. ದಿ.03.03.2019 ರಂದು ರಾತ್ರಿ 11.30 ಕ್ಕೆ ಠಾಣಾ ಪ್ರಭಾರದಲ್ಲಿದ್ದಾಗ ಚಾಸಾ 1 ರವರು ಹಾಜರಾಗಿ ನೀಡಿದ ದೂರನ್ನು ಸ್ವೀಕರಿಸಿ ಠಾಣಾ ಗುನ್ನ ನಂ.28/19 ರಲ್ಲಿ ಪ್ರ.ವ.ವ ದಾಖಲಿಸಿರುತ್ತೇನೆ. ದಿ.04.03.2019 ರಂದು ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಚಾಸಾ 1 ರವರು ತೋರಿಸಿದ ಸ್ಥಳದಲ್ಲಿ ಚಾಸಾ 8 ಮತ್ತು 9 ರವರ ಸಮಕ್ಷಮ ಬೆ.10.30-11.15 ರವರೆಗೆ ಪಂಚನಾಮೆ ಜರುಗಿಸಿ ಒಂದು ಲಗ್ನ ಪತ್ರಿಕೆ, 2 ಭಾವಚಿತ್ರಗಳನ್ನು ಅಮಾನತ್ತು ಪಡಿಸಿಕೊಂಡಿರುತ್ತೇನೆ. ಚಾಸಾ 1 ರವರ ಮರುಹೇಳಿಕೆ ಮತ್ತು ಚಾಸಾ 2 ರಿಂದ 6 ರವರ ಹೇಳಿಕೆ ದಾಖಲಿಸಿರುತ್ತೇನೆ. ದಿ.06.03.2019 ರಂದು ಆರೋಪಿಯು ಠಾಣೆಗೆ ಹಾಜರಾಗಿದ್ದು ಆತನನ್ನು ಠಾಣಾ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ. ದಿ.21.06.2019 ರಂದು ಘಟನಾ ಸ್ಥಳದ ಅಸೆಸ್ಮೆಂಟನ್ನು ಪಡೆದುಕೊಂಡಿರುತ್ತೇನೆ. ತನಿಖೆ ಪೂರ್ತೈಸಿ ಅಂತಿಮ ವರದಿ ಸಲ್ಲಿಸಿರುತ್ತೇನೆ. ಸಾಕ್ಷಿ ನಿಪಿ 2 ಮತ್ತು 3 ರಲ್ಲಿ ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ 2ಬಿ, 3ಡಿ ಎಂದು ಗುರುತಿಸಲಾಯಿತು. ಪ್ರ.ವ.ವ ಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಪ್ರ.ವ.ವ ಯನ್ನು ನಿಪಿ 6 ಎಂದು ಸಾಕ್ಷಿ ಸಹಿಯನ್ನು 6ಎ ಎಂದು ಗುರುತಿಸಲಾಯಿತು. ಲಗ್ನಪತ್ರಿಕೆ, ಅಧಾರ್ ಕಾರ್ಡ್, 2 ಭಾವಚಿತ್ರಗಳನ್ನು ನಿಪಿ 7 ರಿಂದ 10 ಎಂದು ಗುರುತಿಸಲಾಯಿತು.

ಸಾಕ್ಷಿ ಅಸೆಸ್ಮೆಂಟನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 11 ಎಂದು ಸಾಕ್ಷಿ ಸಹಿಯನ್ನು 11ಎ ಎಂದು ಗುರುತಿಸಲಾಯಿತು. ಸಾಕ್ಷಿ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ**

ನಿಪಿ 2 ಮತ್ತು 3 ನ್ನು ನಾನೇ ಸೃಷ್ಟಿಸಿರುತ್ತೇನೆ ಚಾಸಾ 1 ರವರು ಹೇಳಿಕೆ ನೀಡಿರುವುದಿಲ್ಲ ಎಂದರೆ ಸರಿಯಲ್ಲ. ಚಾಸಾ 2 ರಿಂದ 6 ರವರ ಹೇಳಿಕೆಯನ್ನು ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ನಿಪಿ 3 ನ್ನು ಠಾಣೆಯಲ್ಲಿ ಸೃಷ್ಟಿಸಿರುತ್ತೇನೆ ಸ್ಥಳಕ್ಕೆ ಹೋಗಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿಗೂ ಈ ಪ್ರಕರಣಕ್ಕೂ ಸಂಬಂಧ ಇಲ್ಲದಿದ್ದರೂ ಸುಳ್ಳು ಅಂತಿಮ ವರದಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಿರುತ್ತೇನೆ.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿರುತ್ತಾರೆ.

(ಶ್ರೀಮತಿ ಸ್ನೇಹ ಎಂ.)
ವ್ಯವಹಾರ ನ್ಯಾಯಾಧೀಶರು,
ಮತ್ತು ಜೆಎಂಎಫ್ ಸಿ, ಆಲೂರು .